ಒಂದನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಃ ನ್ಯಾಯಾಲಯ, ಮದ್ದೂರು

ಸಿಸಿ 1939/2016

| | | |
|---|---|---|
| ಸಾಕ್ಷಿದಾರರ ಹೆಸರು | - ಶಿವಮಂಜು | ಚಾಸಾ-10 |
| ತಂದೆಯ ಹೆಸರು | - ಲೇ ಗುರುಸಿದ್ದಯ್ಯ | ಫ್ರಾಸಾ-7 |
| ವಯಸ್ಸು | - 63 ವರ್ಷ | |
| ಉದ್ಯೋಗ | - ನಿವೃತ್ತ ಪಿಎಸ್ ಐ | |
| ವಾಸಸ್ಥಳ | - ಕಲ್ಲಹಳ್ಳಿ ಮಂಡ್ಯ | |

ದಿನಾಂಕಃ-23-07-2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎಪಿಪಿ ರವರಿಂದಃ-**

ನಾನು 2016 ರಿಂದ 2018 ರವರೆಗೆ ಪಿಎಸ್ ಐ ಯಾಗಿ ಕೊಪ್ಪ ಪೊಲೀಸ್ ಠಾಣೆಯಲ್ಲಿ ಕರ್ತವ್ಯವನ್ನು ನಿರ್ವಹಿಸಿದ್ದೆನೆ.

ನಾನು ಚಾಸಾ-9 ರವರಿಂದ ಈ ಕೇಸಿನ ಕಡತವನ್ನು ಪಡೆದುಕೊಂಡು ಪರಿಶೀಲಿಸಿರುತ್ತೇನೆ. ದಿ 23-11-2016 ರಂದು ಚಾಸಾ-1 ರವರ ಗಾಯದ ಪ್ರಮಾಣ ಪತ್ರವನ್ನು ಸರ್ಕಾರಿ ಆಸ್ಪತ್ರೆಯಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಗಾಯದ ಪ್ರಮಾಣ ಪತ್ರವನ್ನು ನಿಪಿ-7 ಎಂದು, ಸಾಕ್ಷಿಯ ಸಹಿ ನಿಪಿ-7 ಎ ಎಂದು ಗುರುತಿಸಲಾಯಿತು. ನಂತರ ತನಿಖೆ ಪೂರ್ಣಗೊಂಡಿದ್ದರಿಂದ ಆರೋಪಿ ವಿರುದ್ಧ ಆರೋಪ ಸಾಬೀತಾದ ಕಾರಣ ಅವರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೆನೆ.

ಪಾಟೀ ಸವಾಲುಃ ಆರೋಪಿ ಪರ ಶ್ರೀ. ಎಂಕೆಜೆ ವಕೀಲರಿಂದಃ

ನಾನು ಗಾಯದ ಪ್ರಮಾಣ ಪತ್ರವನ್ನು ಪರಿಶೀಲನೆ ಮಾಡಿರುತ್ತೇನೆ. ಗಾಯದ ಪ್ರಮಾಣ ಪತ್ರದಲ್ಲಿ ಯಾರಿಂದ ಹಲ್ಲೆ ಆಗಿದೆ ಎಂದು ನಮುದಾಗಿದೆ ಎಂದರೆ ಸರಿ. ನಾನು ಎಂಎಲ್ ಸಿ ರಿಜಿಸ್ಟರ್ ನ್ನು ಹಾಜರುಪಡಿಸಿಲ್ಲ. ನಿಪಿ-7 ರಲ್ಲಿ ತೋರಿಸಿರುವ ರಾಜು ಎಂಬ ವ್ಯಕ್ತಿಯನ್ನು ಸಾಕ್ಷಿಯನ್ನಾಗಿ ಮಾಡಿಲ್ಲ. ಆರೋಪಿ ಯಾವುದೇ ಹಲ್ಲೆ ಮಾಡದೇ ಇದ್ದರೂ ಗಾಯದ ಪ್ರಮಾಣ ಪತ್ರವನ್ನು ಪಡೆದು ಸುಳ್ಳು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಯಾವುದೇ ಆರೋಪ ಸಾಬೀತಾಗದೇ ಇದ್ದರೂ ಕೂಡ ಸುಳ್ಳು ದಾಖಲಾತಿಗಳನ್ನು ಸೃಷ್ಟಿ ಮಾಡಿ, ಅವರ ವಿರುದ್ದ ಸುಳ್ಳು ಸುಳ್ಳು ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೀರಾ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)
ಓ ಹೇ ಕೇ ಸರಿಯಾಗಿದೆಂದು ಒಪ್ಪಿರುತ್ತಾರೆ.

ಒಂದನೇ ಅಪರ ಸಿವಿಲ್ ಮತ್ತು ಜೆಎಂಎಫ್,ಸಿ,
ನ್ಯಾಯಾಧೀಶರು, ಮದ್ದೂರು.

ಸಾಕ್ಷಿಯ ಸಹಿಃ